**ಕರ್ನಾಟಕ ಸರ್ಕಾರ**
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು-1.
ದೂ. **080-22372738** E-mail: nregs-ka@nic.in

ಸಂಖ್ಯೆ: ಗ್ರಾಅಪ 366 ಉಖಾಯೋ 2017 ದಿನಾಂಕ: 30.08.2017

## ನೇರಸಂದರ್ಶನ

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಈ ಕೆಳಕಂಡ 11 ಜಿಲ್ಲೆಗಳಲ್ಲಿ ಗುಣನಿಯಂತ್ರಣ ಮಾನಿಟರ್ ಹುದ್ದೆಗಳ ನೇಮಕಾತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲೆಗಳ ಹೆಸರು : **ಬಾಗಲಕೋಟೆ, ವಿಜಯಪುರ, ತುಮಕೂರು, ಗದಗ, ಉತ್ತರಕನ್ನಡ, ಬೆಳಗಾಂ, ಕೊಪ್ಪಳ, ಬೀದರ್, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಹಾವೇರಿ.**

ಜಿಲ್ಲೆಗಳಲ್ಲಿ ಗುಣನಿಯಂತ್ರಣ ಮಾನಿಟರ್ ಆಗಿ ಕಾರ್ಯನಿರ್ವಹಿಸಲು ಆಸಕ್ತಿ ಇರುವ ವ್ಯಕ್ತಿಗಳು ಅರ್ಹತಾ ಮಾನದಂಡಗಳು ಹಾಗೂ ಇತರ ಸೇವಾ ಷರತ್ತುಗಳ ವಿವರಗಳಿಗಾಗಿ ಇಲಾಖೆಯ ವೆಬ್‌ಸೈಟ್ www.karnregs.kar.nic.in ಅನ್ನು ಸಂದರ್ಶಿಸುವುದು. ನಿಗಧಿ ಪಡಿಸಿರುವ ಅರ್ಜಿ ನಮೂನೆಯನ್ನು ಮೇಲಿನ ವೆಬ್-ಸೈಟ್ ನಿಂದ ಅವರೋಹಣ (download) ಮಾಡಿಕೊಳ್ಳಬಹುದಾಗಿರುತ್ತದೆ. ಅವಶ್ಯಕ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, 3ನೇ ಹಂತ, 2ನೇ ಮಹಡಿ, ಅಂಬೇಡ್ಕರ್ ವೀದಿ, ಬೆಂಗಳೂರು-560001 ಇವರಿಗೆ ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿದ ಎಲ್ಲಾ ದಾಖಲೆಯೊಂದಿಗೆ **ದಿನಾಂಕ: 06.10.2017 ರಂದು** ಬೆಳಿಗ್ಗೆ 11.00 ಗಂಟೆಗೆ ನೇರಸಂದರ್ಶನ ಸಂದರ್ಭದಲ್ಲಿ ಅಥವಾ ಅದಕ್ಕೂ ಪೂರ್ವ ತಲುಪುವಂತೆ ಸಲ್ಲಿಸಬಹುದಾಗಿದೆ. ಅಪೂರ್ಣ ಮಾಹಿತಿ ಹೊಂದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು (ತಾಂತ್ರಿಕ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ (ದೂರವಾಣಿಸಂಖ್ಯೆ:080-22342162) ಇವರನ್ನು ಕಛೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ,

ಆಯುಕ್ತರು ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.